ಸುವರ್ಣ ಸರ್ಕಾರ
ಆಯುಕ್ತರ ಕಾರ್ಯಾಲಯ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು

ಸಂಖ್ಯೆ:ಸನಿ[ವೈ]ಧೂಮಪಾನ: 1 /07–08 ದಿನಾಂಕ: 25.4.2007

**ಸು ತ್ತೋ ಲೆ**

ವಿಷಯ: ಸಿಗರೇಟು ಮತ್ತರು ತಂಬಾಕು ಉತ್ಪನ್ನಗಳ ಸೇವನೆ ಮತ್ತು ಉಪಯೋಗದಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ.

::::

**Cigarette and other Tobacco Products [prohibition of advertisement and regulation of Trade and Commerce, Production, Supply and the Distribution] Act 2003** ಪ್ರಸ್ತುತ ರಾಜ್ಯದಲ್ಲಿ ಜಾರಿಯಲ್ಲಿದೆ. ಇದರಡಿಯಲ್ಲಿ ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುವುದನ್ನು ನಿಷೇಧಿಸಲಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಆರೋಗ್ಯ ಇಲಾಖೆಯ ಕಛೇರಿಗಳಲ್ಲಿ ಸಿಗರೇಟು, ಬೀಡಿ, ಚುಟ್ಟಾ ಮುಂತಾದುವುಗಳನ್ನು ಸೇದುವುದನ್ನು ನಿಷೇದಿಸಲಾಗಿದೆ. ಆದ್ದರಿಂದ ಈ ಬಗ್ಗೆ ಸಾರ್ವಜನಿಕರ ತಿಳುವಳಿಕೆಗಾಗಿ ಆಸ್ಪತ್ರೆಗಳಲ್ಲಿ ಹಾಗೂ ಆರೋಗ್ಯ ಇಲಾಖೆಯ ಕಛೇರಿಗಳ ಪ್ರಮುಖವಾಗಿ ಕಾಣುವ ಸ್ಥಳಗಳಲ್ಲಿ **ಧೂಮಪಾನವನ್ನು ನಿಷೇದಿಸಿದೆ** . ಎಂದು ದಪ್ಪ ಅಕ್ಷರಗಳಲ್ಲಿ ಫಲಕಗಳನ್ನು ಹಾಕುವುದು. ಮೇಲೆ ತಿಳಿಸಿರುವ ಕಾಯ್ದೆಯಡಿಯಲ್ಲಿನ ಈ ನಿರ್ಬಂಧವನ್ನು ಉಲ್ಲಂಘಿಸಿದವರ ವಿರುದ್ಧ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗೆ ದೂರನ್ನು ಕೊಡತಕ್ಕದ್ದು.

ಸರ್ಕಾರಿ ಆಸ್ಪತ್ರೆಗಳು ಹಾಗೂ ಆರೋಗ್ಯ ಇಲಾಖೆಯ ಕಛೇರಿಗಳಿಗೆ ಸಂಬಂಧಿಸಿದ ಆಡಳಿತಾಧಿಕಾರಿಗಳು ಅವರುಗಳಿಗೆ ಸಂಬಂಧಿಸಿದ ಆಸ್ಪತ್ರೆಗಳು ಮತ್ತು ಕಛೇರಿಗಳಲ್ಲಿ ಧೂಮಪಾನ ಮಾಡುವುದನ್ನು ನಿಷೇದಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳತಕ್ಕದ್ದು.

Basavaraju 25/4/07

ಆಯುಕ್ತರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.

ಇವರಿಗೆ:

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರುಗಳು
3. ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು.

ಪ್ರತಿಯನ್ನು:

1. ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು. ಬೆಂಗಳೂರು
3. ನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಬೆಂಗಳೂರು
4. ಯೋಜನಾ ಆಡಳಿತಾಧಿಕಾರಿ, ಕೆ.ಹೆಚ್.ಎಸ್.ಡಿ.ಪಿ. ಬೆಂಗಳೂರು